# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 63(79)
ಸದಸ್ಯರ ಹೆಸರು : ಶ್ರೀ ಡಿ.ಎಸ್. ಅರುಣ್
ಉತ್ತರಿಸಬೇಕಾದ ದಿನಾಂಕ : 27.01.2026
ಉತ್ತರಿಸುವವರು : ಪೌರಾಡಳಿತ ಮತ್ತು ಹಜ್ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಇತ್ತೀಚಿನ ದಿನಗಳಲ್ಲಿ ರಾಜ್ಯದ ಮಹಾನಗರ ಪಾಲಿಕೆ ನಗರಸಭೆ ಹಾಗೂ ಪುರಸಭಾ ವ್ಯಾಪ್ತಿಗಳಲ್ಲಿ ಅಕ್ರಮವಾಗಿ ಫ್ಲೆಕ್ಸ್ ಮತ್ತು ಬ್ಯಾನರ್‌ಗಳನ್ನು ಅಳವಡಿಸುವ ಪ್ರಮಾಣ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | **ಹೌದು**<br>ಕರ್ನಾಟಕ ಪೌರಸಭೆಗಳ ಅಧಿನಿಯಮ ಪ್ರಕರಣ 136 ರಡಿ ಅನಧಿಕೃತ ಜಾಹಿರಾತನ್ನು ಅಳವಡಿಸಿದ್ದಲ್ಲಿ ಅಂತಹ ಜಾಹಿರಾತನ್ನು ತೆರವುಗೊಳಿಸಲು ಸಂಬಂಧಿಸಿದ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು /ಮುಖ್ಯಾಧಿಕಾರಿಗಳಿಗೆ ಅಧಿಕಾರ ಇರುತ್ತದೆ.<br>ಕರ್ನಾಟಕ ಬಹಿರಂಗ ಸ್ಥಳಗಳ (ವಿರೂಪಗೊಳಿಸುವುದನ್ನು ಪ್ರತಿಬಂಧಿಸುವ) ಅಧಿನಿಯಮ 1981 ರ ಪ್ರಕರಣ 3 ರಲ್ಲಿ ಜಾಹಿರಾತುಗಳ ಮೂಲಕ ಅನಧಿಕೃತವಾಗಿ ಸಾರ್ವಜನಿಕ ದೃಷ್ಟಿಗೆ ಒಳಗಾಗಿರುವ ಯಾವುದೇ ಸ್ಥಳಗಳ ಮೇಲೆ ಅಂಟಿಸಿದರೆ / ನಿಲ್ಲಿಸಿದರೆ / ಪ್ರದರ್ಶಿಸಿದರೆ ಅಂತಹ ವ್ಯಕ್ತಿಗಳಿಗೆ 6 ತಿಂಗಳುಗಳ ವರೆಗೆ ವಿಸ್ತರಿಸಬಹುದಾದ ಅವಧಿಯ ಕಾರಾಗೃಹ ವಾಸ ಅಥವಾ ಒಂದು ಸಾವಿರ ರೂ. ಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆ ಅಥವಾ ಅವೆರಡನ್ನೂ ವಿಧಿಸಲು ಅವಕಾಶ ಕಲ್ಪಿಸಲಾಗಿದೆ.<br>ಕರ್ತವ್ಯ ನಿರತ ಸರ್ಕಾರಿ ನೌಕರರಿಗೆ ಕಾನೂನು ರಕ್ಷಣೆ ಹಾಗೂ ಆಡಳಿತಾತ್ಮಕ ಬೆಂಬಲ ನೀಡಲು ಕರ್ತವ್ಯಕ್ಕೆ ಧಕ್ಕೆ ಉಂಟುಮಾಡಿದ್ದಲ್ಲಿ ಅಂತಹವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.<br><br>ಈ ಅಕ್ರಮಗಳಿಗೆ ಭಾರಿ ಪ್ರಮಾಣದ ದಂಡ ವಿಧಿಸುವ ಪ್ರಸ್ತಾಪ ಇರುವುದಿಲ್ಲ. |
| ಆ) | ಇಂತಹ ಅನಧಿಕೃತ ಫ್ಲೆಕ್ಸ್ ಮತ್ತು ಬ್ಯಾನರ್ ಗಳಿಂದ ಸಾರ್ವಜನಿಕ ಸುರಕ್ಷತೆ, ಸಂಚಾರ ವ್ಯವಸ್ಥೆ, ನಗರ ಸೌಂದರ್ಯ ಮತ್ತು ಪರಿಸರಕ್ಕೆ ತೀವ್ರ ಹಾನಿಯಾಗುತ್ತಿರುವುದನ್ನು ಸರ್ಕಾರ ಒಪ್ಪುತ್ತದೆಯೇ; ಹಾಗಿದ್ದಲ್ಲಿ. ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕಟ್ಟುನಿಟ್ಟಿನ ಕ್ರಮಗಳೇನು; | |
| ಇ) | ಅಕ್ರಮ ಫ್ಲೆಕ್ಸ್ ತೆರವುಗೊಳಿಸುವ ಕಾರ್ಯಾಚರಣೆಯಲ್ಲಿ ತೊಡಗುವ ಅಧಿಕಾರಿಗಳಿಗೆ ಸಮರ್ಪಕ ಕಾನೂನು ರಕ್ಷಣೆ ಮತ್ತು ಆಡಳಿತಾತ್ಮಕ ಬೆಂಬಲದ ಕೊರತೆಯಿಂದಾಗಿ ಅವರ ಮೇಲೆ ದೌರ್ಜನ್ಯಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅಧಿಕಾರಿಗಳ ಸುರಕ್ಷತೆಗಾಗಿ ಸರ್ಕಾರ ರೂಪಿಸಿರುವ ಕಾರ್ಯ ತಂತ್ರಗಳೇನು; | |
| ಈ) | ಪ್ರಸ್ತುತ ಇರುವ ನಿಯಮಗಳು ಪರಿಣಾಮಕಾರಿಯಾಗಿ ಜಾರಿಯಾಗದಿರುವುದನ್ನು ಗಮನಿಸಿ, ಅಕ್ರಮ ಫ್ಲೆಕ್ಸ್ ಹಾವಳಿ ತಡೆಗಟ್ಟಲು ಸರ್ಕಾರವು ಹೊಸ ಮಾರ್ಗಸೂಚಿ ಅಥವಾ ಕಾನೂನು ತಿದ್ದುಪಡಿ ತರಲು ಉದ್ದೇಶಿಸಿದೆಯೇ? (ಪ್ರಸ್ತಾವನೆಯ ಸಂಪೂರ್ಣ ವಿವರಗಳನ್ನು ನೀಡುವುದು) | |

ಇ-ಸಂಖ್ಯೆ: ನಅಇ 23 ಜಿಇಎಲ್ 2026 (ಇ)

( ರಹೀಂ ಖಾನ್ )
ಪೌರಾಡಳಿತ ಮತ್ತು ಹಜ್ ಸಚಿವರು